# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಆಯುಕ್ತರವರ ಕಛೇರಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಎನ್.ಆರ್.ಚೌಕ, ಬೆಂಗಳೂರು-560002.

---

ಸಂಖ್ಯೆ: ಮು.ಆ.ಅ(ಸಾ.ಆ)/ಪಿಆರ್/P.97/2019-20 ದಿನಾಂಕ :

ವಿಷಯ : ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿರುವ ಉದ್ದಿಮೆಗಳ ನಾಮಫಲಕಗಳಲ್ಲಿ ಅಗ್ರಸ್ಥಾನದಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಅಳವಡಿಸುವ ಬಗ್ಗೆ.

******

ಪ್ರಸ್ತಾವನೆ :

ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕನ್ನಡೀಕರಣಕ್ಕಾಗಿ ಹಲವು ಅಂಶಗಳನ್ನು ಅನುಷ್ಠಾನಗೊಳಿಸಬೇಕೆಂದು ಹಲವಾರು ಬಾರಿ ಸೂಚಿಸಿರುವ ನಿಟ್ಟಿನಲ್ಲಿ ಹಾಗೂ ಪಾಲಿಕೆಗೆ ಈ ಸಂಬಂಧ ನಿರ್ದೇಶನ ನೀಡಲು ಪ್ರಾಧಿಕಾರವು ಸೂಚಿಸಿರುವ ಅಂಶಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಕರ್ನಾಟಕ ಸರ್ಕಾರದ ಅಧೀನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆಯವರು ಸೂಚಿಸಿರುತ್ತಾರೆ.

ಮೇಲ್ಕಂಡ ವಿಷಯ ಮತ್ತು ಸಂದರ್ಭಕ್ಕೆ ಅನುಗುಣವಾಗಿ, ಪಾಲಿಕೆಯ ಆರೋಗ್ಯ ವಿಭಾಗದಿಂದ ಉದ್ದಿಮೆ ಪರವಾನಗಿ ನೀಡುವ ಸಂದರ್ಭದಲ್ಲಿ ಆಯಾ ಅಂಗಡಿ ಮುಗ್ಗಟ್ಟುಗಳು, ಹೋಟೆಲ್‌ಗಳು, ಕಂಪನಿಗಳು ಹಾಗೂ ಇತರೆ ಪರವಾನಗಿ ಪಡೆದಿರುವ ವ್ಯಾಪಾರಿಗಳು ತಮ್ಮ ತಮ್ಮ ಶಾಖೆಯ ಮುಂದೆ ಅಳವಡಿಸುವ / ಅಳವಡಿಸಿರುವ ನಾಮಫಲಕಗಳಲ್ಲಿ ಅಗ್ರಸ್ಥಾನದಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಅಳಡಿಸಿಕೊಳ್ಳುವಂತೆ ಸಂಬಂಧಪಟ್ಟ ವಾಣಿಜ್ಯ ಪರವಾನಗಿದಾರರುಗಳಿಗೆ ಸೂಚನೆ ನೀಡುವಂತೆ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ತಿಳಿಸಿರುತ್ತಾರೆ (ಶೇ. 60% ರಷ್ಟು ಕನಿಷ್ಠ ಕನ್ನಡ ಭಾಷೆಯಲ್ಲಿರುವಂತೆ ಅಂದರೆ ಸ್ಪಷ್ಟವಾಗಿ ಎದ್ದು ಕಾಣಿಸುವಂತೆ ಕನ್ನಡ ಪದಗಳ ಬಳಕೆಯನ್ನು ಉಪಯೋಗಿಸುವುದು) ಒಂದು ವೇಳೆ ಕನ್ನಡ ಭಾಷೆಯನ್ನು ನಾಮಫಲಕಗಳಲ್ಲಿ ಅಗ್ರಸ್ಥಾನದಲ್ಲಿ ಬಳಸದೇ ಇದ್ದರೆ ಪರವಾನಗಿಯನ್ನು ರದ್ದುಪಡಿಸುವುದಾಗಿ ಹಾಗೂ ಹೊಸದಾಗಿ ಪರವಾನಗಿ ಅರ್ಜಿ ಸಲ್ಲಿಸಿರುವಂತಹ ಅರ್ಜಿದಾರರಿಗೂ ಸಹ ತಮ್ಮ ತಮ್ಮ ನಾಮಫಲಕಗಳಲ್ಲಿ ಅಗ್ರಸ್ಥಾನದಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಉಪಯೋಗಿಸಬೇಕೆಂದು ಸ್ಪಷ್ಟ ಸೂಚನೆಯನ್ನು ನೀಡುವಲ್ಲಿ ಕ್ರಮವಹಿಸುವುದು.

## : ಆದೇಶ :

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಅಂಗಡಿ ಮುಗ್ಗಟ್ಟುಗಳು, ಹೋಟೆಲ್‌ಗಳು, ಕಂಪನಿಗಳು ಹಾಗೂ ಇತರೆ ಪರವಾನಗಿ ಪಡೆದಿರುವ ವ್ಯಾಪಾರಿಗಳು ತಮ್ಮ ತಮ್ಮ ಶಾಖೆಯ ಮುಂದೆ ಅಳವಡಿಸುವ / ಅಳವಡಿಸಿರುವ ನಾಮಫಲಕಗಳಲ್ಲಿ ಅಗ್ರಸ್ಥಾನದಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಬಳಸುವಂತೆ ಆದೇಶಿಸಲಾಗಿದೆ.

ಮು.ಪಿ.ನೋ.

ನಾಮಫಲಕಗಳಲ್ಲಿ ಕನಿಷ್ಠ ಮಟ್ಟ ಶೇ. 60% ರಷ್ಟು ಕನ್ನಡ ಭಾಷೆಯಲ್ಲಿರುವಂತೆ ಅಂದರೆ ಸ್ಪಷ್ಟವಾಗಿ ಕಾಣುವಂತೆ ಕನ್ನಡ ಪದಗಳ ಬಳಕೆಯನ್ನು ಉಪಯೋಗಿಸುವುದನ್ನು ಕಡ್ಡಾಯ ಮಾಡಲಾಗಿದೆ.

ಕನ್ನಡ ಭಾಷೆಯನ್ನು ನಾಮಫಲಕಗಳಲ್ಲಿ ಮೇಲ್ಕಂಡ ಆದೇಶದಂತೆ ಬಳಸದಿದ್ದಲ್ಲಿ, ಪರವಾನಗಿಯನ್ನು ರದ್ದುಪಡಿಸಲಾಗುತ್ತದೆ. ಈ ಹಿಂದೆಯೇ ಪರವಾನಗಿ ಪಡೆದಿರುವವರು ಸಹ 1ನೇ ನವೆಂಬರ್, 2019 ರೊಳಗೆ ಈ ಆದೇಶಕ್ಕೆ ಅನುಗುಣವಾಗಿ ನಾಮಫಲಕವನ್ನು ಪರಿವರ್ತನೆಗೊಳಿಸುವುದನ್ನು ಸಹ ಕಡ್ಡಾಯಗೊಳಿಸಲಾಗಿದೆ.

19/10/2019

ಆಯುಕ್ತರು

Commissioner

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Bruhat Bengaluru Mahanagara Palike

ಪ್ರತಿಗಳು :

1. ಪೂಜ್ಯ ಮಹಾಪೌರರ ಅವಗಾಹನೆಗಾಗಿ ಆಪ್ತ ಶಾಖೆಗೆ ಸಲ್ಲಿಸಿದೆ.
2. ಉಪ ಮಹಾಪೌರರ ಅವಗಾಹನೆಗಾಗಿ ಆಪ್ತ ಶಾಖೆಗೆ ಸಲ್ಲಿಸಿದೆ.
3. ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಕೌನ್ಸಿಲ್ ಕಾರ್ಯದರ್ಶಿಗಳು ರವರ ಅವಗಾಹನೆಗೆ ತರುತ್ತಾ, ಪಾಲಿಕೆಯ ಎಲ್ಲಾ ಸ್ಥಾಯಿ ಸಮಿತಿಯವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
5. ವಿಶೇಷ ಆಯುಕ್ತರು (ಯೋಜನೆ ಮತ್ತು ಆರೋಗ್ಯ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
6. ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
7. ವಿಶೇಷ ಆಯುಕ್ತರು (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
8. ಎಲ್ಲಾ ವಲಯ ಅಪರ / ಜಂಟಿ ಆಯುಕ್ತರುರವರ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
9. ಮುಖ್ಯ ಆರೋಗ್ಯಾಧಿಕಾರಿಗಳು (ಸಾರ್ವಜನಿಕ ಆರೋಗ್ಯ ಮತ್ತು ಕ್ಲಿನಿಕಲ್)ರವರ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
10. ಸಾರ್ವಜನಿಕ ಸಂಪರ್ಕಾಧಿಕಾರಿರವರ ದಿನಪತ್ರಿಕೆಗಳಲ್ಲಿ ಸದರಿ ವಿಷಯದ ಸಂಬಂಧ ಸಾರ್ವಜನಿಕ ಪ್ರಕಟಣೆ ಹೊರಡಿಸಲು ಸೂಚಿಸಿದೆ.
11. ಪಾಲಿಕೆಯ ಎಲ್ಲಾ ವಲಯ ಆರೋಗ್ಯಾಧಿಕಾರಿಗಳು / ಉಪ ಆರೋಗ್ಯಾಧಿಕಾರಿಗಳ (ಸಾ.ಆ.) ಬಿ.ಬಿ.ಎಂ.ಪಿ ರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
12. ಪಾಲಿಕೆಯ ಎಲ್ಲಾ ಆರೋಗ್ಯ ವೈದ್ಯಾಧಿಕಾರಿರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
13. ಕಛೇರಿ ಪ್ರತಿ.